ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
ರಾಷ್ಟ್ರೀಯ ಸೇವಾ ಯೋಜನೆ

ಸಂಖ್ಯೆ: ಡಿಟಿಇ/ಎನ್‌ಎಸ್‌ಎಸ್/01/ಐಡಿಪಿ/2019-20

ಸಂಯೋಜನಾಧಿಕಾರಿಯವರ ಕಛೇರಿ,
ಅರಮನೆ ರಸ್ತೆ ಬೆಂಗಳೂರು-01
ದಿನಾಂಕ: 06.02.2020

**ಸುತ್ತೋಲೆ**

**ವಿಷಯ:** ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣಾ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸುವ ಕುರಿತು.

**ಉಲ್ಲೇಖ:** ಕರ್ನಾಟಕ ಆರೋಗ್ಯ ಇಲಾಖೆ ಮತ್ತು ಕು.ಕ ಸೊಸೈಟಿ ಬೆಂಗಳೂರು ಇವರ ಪತ್ರ ಸಂಖ್ಯೆ: ಬೆಂನಜಿ/ಜಿ.ಆರ್.ಸಿ.ಹೆಚ್.ಒ/810/2019-20 ದಿನಾಂಕ: 28-01-2020

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯವು "ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ" ಕಾರ್ಯಕ್ರಮವನ್ನು ದಿನಾಂಕ: 10.02.2020 ರಂದು 1 ರಿಂದ 19 ವರ್ಷದ ಒಳಗಿನ ಮಕ್ಕಳಿಗೆ Albendazol ಮಾತ್ರೆಯನ್ನು ನೀಡುವುದರ ಮೂಲಕ ಜಾರಿಗೊಳಿಸಲು ಉದ್ದೇಶಿಸಿದೆ. ಸದರಿ ದಿನದಂದು ಗೈರುಹಾಜರಾದ ಮಕ್ಕಳಿಗೆ ಪುನ: 17.02.2020 ರಂದು Mop-up ಕಾರ್ಯಕ್ರಮದಲ್ಲಿ ಮಾತ್ರೆಗಳನ್ನು ವಿತರಿಸಲು ಉದ್ದೇಶಿಸಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೈದ್ಯರು ಮತ್ತು ಸಂಬಂಧಿಸಿದ ಸಿಬ್ಬಂದಿ ರಾಜ್ಯದ ಎಲ್ಲಾ ತಾಂತ್ರಿಕ ಶಿಕ್ಷಣ ಸಂಸ್ಥೆಗಳಿಗೆ ಸದರಿ ದಿನಗಳಂದು ಭೇಟಿ ನೀಡಿ ಜವಾಬ್ದಾರಿಯುತ ವೈದ್ಯರೇ ಮಕ್ಕಳಿಗೆ ಔಷಧಿಯನ್ನು ನೀಡಿ ಮಕ್ಕಳಿಗೆ ಜಂತು ಹುಳು ನಿರ್ಮೂಲನೆ ಕುರಿತಾದ ಜಾಗೃತಿ ಮೂಡಿಸಲಿದ್ದಾರೆ. ಸದರಿ ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ಜಂತು ಹುಳು ನಿರ್ಮೂಲನೆ ಕುರಿತಾದ ಜಾಗೃತಿ ಹಾಗೂ ಆರೋಗ್ಯ ವೃದ್ಧಿಸುವಲ್ಲಿ ಸಹಕಾರಿಯಾಗಲಿದೆ ಎಂದು ಆಶಿಸಲಾಗಿದೆ. ಸದರಿ ಕಾರ್ಯಕ್ರಮದ ಯಶಸ್ವಿ ನಿರ್ವಹಣದ ಮೇಲ್ವಿಚಾರಣೆಗಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸಂಬಂಧಿಸಿದ ಸಮೀಕ್ಷಾ ತಂಡವು ತಾಂತ್ರಿಕ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಲಿದೆ. ಸದರಿ ತಂಡವೇ ಯಾದೃಚ್ಛಿಕವಾಗಿ (Randomly)ನಿರ್ಧರಿಸಿದ ಆಯ್ದ ತಾಂತ್ರಿಕ ಶಿಕ್ಷಣ ಸಂಸ್ಥೆಗಳಿಗೆ ಫೆಬ್ರುವರಿ 27 ರಿಂದ ಮಾರ್ಚ 7 ರೊಳಗಾಗಿ ಭೇಟಿ ನೀಡಿ ಅಧಿಕಾರಿ ಮತ್ತು ಸಿಬ್ಬಂದಿಗಳೊಂದಿಗೆ ಸಮೀಕ್ಷಿಸಿ ದತ್ತಾಂಶ ಕಲೆಹಾಕಲಿದೆ.

ಹೆಚ್ಚಿನ ಮಾಹಿತಿಗಾಗಿ ಡಾ. ವೀಣಾ ವಿ. ರಾಜ್ಯ ನೋಡಲ್ ಅಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (080-2234093, rksk.karnataka@gmail.com) ಇವರನ್ನು ಅಥವಾ ಸಂಬಂಧಿಸಿದ ಜಿಲ್ಲಾ ಅಥವಾ ತಾಲೂಕಾವಾರು ಆರೋಗ್ಯ ಅಧಿಕಾರಿಗಳನ್ನು ಈ ಕೆಳಗಿನ ಅಂತರ್ಜಾಲ ಕೊಂಡಿಯ ಮೂಲಕ ಸಂಪರ್ಕಿಸುವುದು https://drive.google.com/file/d/16j9ZG tUHztqD4C9gTKzyPkWVQ1PiBc/view?usp=sharing ರಾಜ್ಯದ ಎಲ್ಲಾ ತಾಂತ್ರಿಕ ಶಿಕ್ಷಣ ಸಂಸ್ಥೆಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳ ಬಹುದಾಗಿದೆ.

ನಿರ್ದೇಶಕರು

ಪ್ರತಿ:
1. ಪ್ರಾಚಾರ್ಯರು ರಾಜ್ಯದ ಎಲ್ಲಾ ತಾಂತ್ರಿಕ ಶಿಕ್ಷಣ ಸಂಸ್ಥೆಗಳು
2. ನೋಡಲ್ ಅಧಿಕಾರಿಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
3. ಎವಿಡನ್ಸ ಯಾಕ್ಷನ್ ಸಂಸ್ಥೆಯ ಅಧಿಕಾರಿಗಳು.
4. ಇ-ಆಡಳಿತ ವಿಭಾಗಕ್ಕೆ ವೆಬ್ ಸೈಟ್ ನಲ್ಲಿ ಪ್ರಕಟಿಸಲು
5. ಕಛೇರಿ ಪ್ರತಿ